**Bangalore**
**Regional News**
**08.08.2025 / 14.30 hrs**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ಮತದಾರರ ಅಧಿಕಾರ ರ್‍ಯಾಲಿ ; ಮತಗಳ್ಳತನ ವಿರುದ್ಧ ತನಿಖೆಗೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆಗ್ರಹ

೨. ಮತಗಳ್ಳತನ ತಡೆಯಲು ಮತದಾರರ ಗುರುತಿನ ಚೀಟಿಯೊಂದಿಗೆ ಆಧಾರ್ ಸಂಖ್ಯೆ ಜೋಡಿಸಿ- ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

೩. ನಂಬಿಯೋ ಸಂಸ್ಥೆ ವರದಿ: ದೇಶದ ಅತ್ಯಂತ ಸುರಕ್ಷಿತ ನಗರಗಳ ಪಟ್ಟಿಯಲ್ಲಿ ಮಂಗಳೂರಿಗೆ ಪ್ರಥಮ ಸ್ಥಾನ

೪. ನಾಡಿನಾದ್ಯಂತ ಸಂಭ್ರಮದ ವರಮಹಾಲಕ್ಷ್ಮಿ ಹಬ್ಬ ಆಚರಣೆ

**<><*<><>*><>**

ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತೊಮ್ಮೆ ಚುನಾವಣಾ ಆಯೋಗದ ವಿರುದ್ಧ ಮತಗಳ್ಳತನ ಆರೋಪ ಮಾಡಿದ್ದಾರೆ. ಬೆಂಗಳೂರಿನ ಸ್ವತಂತ್ರ ಉದ್ಯಾನದಲ್ಲಿ ಕಾಂಗ್ರೆಸ್ ಪಕ್ಷದಿಂದ ಇಂದು ನಡೆದ 'ಮತದಾರರ ಅಧಿಕಾರ ರ್‍ಯಾಲಿ' ಉದ್ದೇಶಿಸಿ ಮಾತನಾಡಿದ ಅವರು, ಭಾರತದ ಚುನಾವಣಾ ಆಯೋಗ ಕಳೆದ ೧೦ ವರ್ಷಗಳ ಮತದಾರರ ಪಟ್ಟಿಯ ಡಿಜಿಟಲ್ ರೂಪಾಂತರ ಮತ್ತು ವಿಡಿಯೋಗ್ರಾಫಿ ಅನ್ನು ತಕ್ಷಣ ತಮ್ಮ ಪಕ್ಷಕ್ಕೆ ಸಲ್ಲಿಸಬೇಕು ಎಂದು ಆಗ್ರಹಿಸಿದರು. ಮತದಾರರ ಪಟ್ಟಿಯಲ್ಲಿ ಮೋಸ ನಡೆದಿದೆ ಎಂದು ಆರೋಪಿಸದ ಅವರು, ಇದರಿಂದ ಬಿಜೆಪಿಗೆ ಚುನಾವಣೆಯಲ್ಲಿ ಪ್ರಯೋಜನವಾಗಿದೆ. ಇದಕ್ಕೆ ಕಾರಣರಾದವರ ವಿರುದ್ಧ ವಿಪಕ್ಷಗಳು ಕಠಿಣ ಕ್ರಮ ಜರುಗಿಸಲಿವೆ ಎಂದು ಅವರು ಎಚ್ಚರಿಸಿದರು. ಬೆಂಗಳೂರು ಕೇಂದ್ರ ಲೋಕಾಸಭಾ ಕ್ಷೇತ್ರದ ಮಹಾದೇವಪುರ ವಿಧಾನಸಭಾ ಕ್ಷೇತ್ರ ಒಂದರಲ್ಲೇ ೧ ಲಕ್ಷ ೨೫೦ ಮತಚೌರ್ಯ ಜರುಗಿದೆ ಎಂದು ಆರೋಪಿಸಿದ ಅವರು, ಇದಕ್ಕೆ ಕಾರಣಕರ್ತರಾದ ಅಧಿಕಾರಿಗಳ ವಿರುದ್ಧ ಕರ್ನಾಟಕ ಸರ್ಕಾರ ತನಿಖೆ ಆರಂಭಿಸಿ, ಕಠಿಣ ಕ್ರಮ ಜರುಗಿಸಬೇಕು ಎಂದು ರಾಹುಲ್ ಗಾಂಧಿ ಆಗ್ರಹಿಸಿದರು. ಚುನಾವಣಾ ಆಯೋಗ ಬಿಜೆಪಿಯ ಶಾಖಾ ಕಚೇರಿ ಆಗಿದೆ ಎಂದು ಆರೋಪಿಸಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಮತಗಳ್ಳತನದ ವಿರುದ್ಧ ಕರ್ನಾಟಕ ರಾಜ್ಯದಿಂದ ಆರಂಭವಾಗಿರುವ ಪ್ರತಿಭಟನಾ ಅಭಿಯಾನ, ಇಡೀ ದೇಶಾದ್ಯಂತ ವ್ಯಾಪಿಸಲಿದೆ ಎಂದು ಹೇಳಿದ್ದಾರೆ. ಪ್ರತಿಭಟನಾ ರ್‍ಯಾಲಿ ಉದ್ದೇಶಿಸಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮಾತನಾಡಿದರು. ಈ ವೇಳೆ ಕಾಂಗ್ರೆಸ್‌ನ ಅನೇಕ ನಾಯಕರು ಉಪಸ್ಥಿತರಿದ್ದರು. ಇನ್ನೊಂದೆಡೆ, ರಾಹುಲ್ ಗಾಂಧಿ ಅವರ ಆರೋಪಕ್ಕೆ ಆಕ್ಷೇಪ ವ್ಯಕ್ತಪಡಿಸಿರುವ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಚುನಾವಣಾ ಆಯೋಗದ ವಿರುದ್ಧ ಕಾಂಗ್ರೆಸ್ ಮಾಡುತ್ತಿರುವ ಆರೋಪ ಸತ್ಯಕ್ಕೆ ದೂರವಾದದ್ದು ಎಂದು ಹೇಳಿದ್ದಾರೆ.

ಧ್ವನಿ : ಆರ್.ಅಶೋಕ, ( ೩೮ ಸೆಕೆಂಡುಗಳು)

<><*<><>*><>

ಮತಗಳ್ಳತನ ತಡೆಯಲು ಮತದಾರರ ಗುರುತಿನ ಚೀಟಿಗೆ ಆಧಾರ್ ಸಂಖ್ಯೆಯನ್ನು ಜೋಡಿಸುವುದೇ ಪರಿಹಾರ ಎಂದು ಕೇಂದ್ರದ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ.ಕುಮಾರಸ್ವಾಮಿ ಚುನಾವಣಾ ಆಯೋಗಕ್ಕೆ ಸಲಹೆ ನೀಡಿದ್ದಾರೆ. ಮತಗಳ್ಳತನ ಎಂಬುದು ಕೆಲವರ ಕಪಟ ಕಥೆ ಎಂದು ಟೀಕಿಸಿರುವ ಸಚಿವರು, ಮುಳ್ಳನ್ನು ಮುಳ್ಳಿನಿಂದಲೇ ತೆಗೆಯಿರಿ ಎಂದು ಚುನಾವಣಾ ಆಯೋಗಕ್ಕೆ ಹೇಳಿದ್ದಾರೆ.ಚುನಾವಣೆ ಆಯೋಗದ ಮೇಲೆ ಸುಳ್ಳಿನ ಸುರಿಮಳೆಯು, ಜನತಂತ್ರಕ್ಕೆ ನೇಣು ಬಿಗಿಯುವ ದೂರ್ತ ಹುನ್ನಾರ. ಅಮೃತಕಾಲದ ಪ್ರಜಾಪ್ರಭುತ್ವಕ್ಕೆ ವಿಷವಿಕ್ಕುವ ಘೋರ ಷಡ್ಯಂತ್ರ್ಯ. ಸಾಂವಿಧಾನಿಕ ಸಂಸ್ಥೆಗಳ ಮೇಲೆ ಅಸತ್ಯದ ಆರೋಪದ ಮೂಲಕ ಅನುಮಾನದ ಪ್ರಯೋಜನ ಪಡೆಯುವ ಕಿಡಿಗೇಡಿ ಪಿತೂರಿ ಎಂದು ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

<><*<><>*><>

ಮಾಜಿ ಮುಖ್ಯಮಂತ್ರಿ ಎಸ್.ನಿಜಲಿಂಗಪ್ಪ ಅವರು ದೇಶ ಕಂಡ ಅಪ್ರತಿಮ ನಾಯಕರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಮಾಜಿ ಮುಖ್ಯಮಂತ್ರಿ ದಿವಂಗತ ಎಸ್.ನಿಜಲಿಂಗಪ್ಪ ಅವರ ಪುಣ್ಯತಿಥಿ ಅಂಗವಾಗಿ ವಿಧಾನಸೌಧದ ಪಶ್ಚಿಮ ದಿಕ್ಕಿನಲ್ಲಿರುವ ಅವರ ಪ್ರತಿಮೆಗೆ ಇಂದು ಮಾಲಾರ್ಪಣೆ ಮಾಡಿ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಗಳಾಗಿದ್ದ ಎಸ್.ನಿಜಲಿಂಗಪ್ಪ ಅವರು, ಏಕೀಕರಣದ ಹೋರಾಟದಲ್ಲಿ ಭಾಗವಹಿಸಿದ್ದರು. ಕರ್ನಾಟಕದ ಏಕೀಕರಣದ ನಂತರ ಮೊದಲನೇ ಮುಖ್ಯಮಂತ್ರಿಗಳಾದರು. ನೀರಾವರಿಗೆ ಹೆಚ್ಚಿನ ಆದ್ಯತೆ ನೀಡಿದರು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

<><*<><>*><>

ಕಡಲ ನಗರಿ ಮಂಗಳೂರು ದೇಶದಲ್ಲೇ ಅತ್ಯಂತ ಸುರಕ್ಷಿತ ನಗರಗಳ ಪಟ್ಟಿಯಲ್ಲಿ ಮೊದಲ ಸ್ಥಾನ ಹಾಗೂ ಜಾಗತಿಕವಾಗಿ ೪೯ನೇ ಸ್ಥಾನ ಪಡೆದಿರುವುದು ಬಹಳ ಹೆಮ್ಮೆಯ ಸಂಗತಿಯಾಗಿದೆ ಎಂದು ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ ಹೇಳಿದ್ದಾರೆ. ವಿಶ್ವದ ಅತಿ ದೊಡ್ಡ ದತ್ತಾಂಶ ಸಂಗ್ರಹ ಸಂಸ್ಥೆಯಾದ ನಂಬಿಯೋ, ಇತ್ತೀಚೆಗೆ ಬಿಡುಗಡೆ ಮಾಡಿದ ೨೦೨೫ರ ಮಧ್ಯಭಾಗದ ಸುರಕ್ಷತಾ ಸೂಚ್ಯಂಕದಲ್ಲಿ ಭಾರತದ ಟಾಪ್ ೧೦ ಸುರಕ್ಷಿತ ನಗರಗಳ ಪಟ್ಟಿಯಲ್ಲಿ ಮಂಗಳೂರನ್ನು ಉಲ್ಲೇಖಿಸಿದೆ ಎಂದರು.

<><*<><>*><>

ಇಂದು ನಾಡಿನಾದ್ಯಂತ ಸಂಭ್ರಮದಿಂದ ವರಮಹಾಲಕ್ಷ್ಮಿ ಹಬ್ಬವನ್ನು ಆಚರಿಸಲಾಗುತ್ತಿದೆ. ಮಹಿಳೆಯರು ಮನೆಗಳನ್ನು ತಳಿರು ತೋರಣಗಳಿಂದ ಅಲಂಕರಿಸಿ, ವಿವಿಧ ಅಲಂಕಾರಗಳಿಂದ ಲಕ್ಷ್ಮಿ ದೇವಿಯನ್ನು ಪೂಜಿಸುತ್ತಿದ್ದಾರೆ. ಕೋಲಾರ ಜಿಲ್ಲಾದ್ಯಂತ ವರಮಹಾಲಕ್ಷ್ಮಿ ಹಬ್ಬವನ್ನು ಶ್ರದ್ಧಾ-ಭಕ್ತಿಯಿಂದ ಆಚರಿಸಲಾಗುತ್ತಿದೆ. ಹೂ, ಹಣ್ಣು, ತರಕಾರಿಗಳ ಬೆಲೆ ಏರಿಕೆಯ ನಡುವೆಯೂ ಇಂದು ಬೆಳಗ್ಗೆಯೂ ಸಹ ಕೋಲಾರ ಹಳೆ ಬಸ್ ನಿಲ್ದಾಣದಲ್ಲಿ ಖರೀದಿ ಜೋರಾಗಿತ್ತು. ಕೆಲ ವೇಳೆ ವಾಹನ ದಟ್ಟಣೆ ಉಂಟಾಗಿತ್ತು. ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಹಾಸನ ಜಿಲ್ಲೆಯಾದ್ಯಂತ ಮನೆ ಮನೆಗಳಲ್ಲಿ ಹಬ್ಬದ ಸಂಭ್ರಮ ಮನೆ

ಮಾಡಿದ್ದು, ಇಂದು ಬೆಳಗ್ಗೆಯಿಂದಲೇ ಮಹಿಳೆಯರು ಪೂಜೆಯಲ್ಲಿ ತೊಡಗಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಯಾದ್ಯಂತ ವರಮಹಾಲಕ್ಷ್ಮೀ ಹಬ್ಬವನ್ನು ಸಂಭ್ರಮದಿಂದ ಆಚರಿಸಲಾಗುತಿದೆ. ಲಕ್ಷ್ಮೀ ಪೂಜೆ ಅಂಗವಾಗಿ ಚಿಕ್ಕಮಗಳೂರು ನಗರದ ಮಾರುಕಟ್ಟೆಗಳಲ್ಲಿ ಜನರು, ಹೂವು, ಹಣ್ಣು, ಬಾಳೆ ಕಂದು, ಪೂಜಾ ಸಾಮಗ್ರಿಗಳನ್ನು ಖರೀದಿಸಿದರು. ಮನೆಗಳು, ಕಚೇರಿಗಳಲ್ಲಿ ಲಕ್ಷ್ಮೀ ಪೂಜೆಯನ್ನು ನೆರೇವೇರಿಸಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಇಂದು ವರಮಹಾಲಕ್ಷ್ಮೀ ಹಬ್ಬವನ್ನು ಶ್ರದ್ಧಾ ಭಕ್ತಿ ಸಂಭ್ರಮದಿಂದ ಆಚರಿಸಲಾಗುತ್ತಿದೆ. ಹೂವು ಹಣ್ಣು, ಅಗತ್ಯ ವಸ್ತುಗಳ ಬೆಲೆ ಏರಿಕೆ ನಡುವೆಯೂ ಹಬ್ಬದ ಸಂಭ್ರಮ ಕಾಣುತ್ತಿದೆ. ದೇವಾಲಯಗಳಲ್ಲಿ ವಿಶೇಷ ಅಲಂಕಾರ ಪೂಜಾ ಕಾರ್ಯಕ್ರಮಗಳು ನಡೆಯುತ್ತಿವೆ.

**<><*<><>*><>**

ಫಿಲಿಪೈನ್ಸ್ ಗಣರಾಜ್ಯದ ಅಧ್ಯಕ್ಷ ಪರ್ಡಿನ್ಯಾಂಡ್ ರೊಮುಡ್ಜ್ ಮಾರ್ಕೋಸ್ ಜ್ಯೂನಿಯರ್, ಫಿಲಿಪೈನ್ಸ್ ದೇಶದ ಪ್ರಥಮ ಮಹಿಳೆ ಲೂಯಿಸ್ ಅರ್ನೆಟಾ ಮಾರ್ಕೋಸ್ ಅವರು, ತಮ್ಮ ದೇಶದ ನಿಯೋಗದೊಂದಿಗೆ ನಿನ್ನೆ ಬೆಂಗಳೂರು ಭೇಟಿಗಾಗಿ ಆಗಮಿಸಿ, ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಿ, ಇಂದು ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಿಂದ ವಾಪಸ್ಸಾದರು. ಫಿಲಿಪೈನ್ಸ್ ಅಧ್ಯಕ್ಷರನ್ನು ರಾಜ್ಯ ಸಾಕ್ಷರತಾ ಮತ್ತು ಶಾಲಾ ಶಿಕ್ಷಣ ಸಚಿವ ಮಧು ಬಂಗಾರಪ್ಪ ಆತ್ಮೀಯವಾಗಿ ಬೀಳ್ಕೊಟ್ಟರು.

**<><*<><>*><>**

ಪ್ರಯಾಣಿಕರ ಅನುಕೂಲ ಹಾಗೂ ಉತ್ತರ ಕರ್ನಾಟಕ ಮತ್ತು ರಾಜ್ಯ ರಾಜಧಾನಿಯ ನಡುವಿನ ಸಂಪರ್ಕವನ್ನು ಹೆಚ್ಚಿಸುವ ನಿಟ್ಟಿನಲ್ಲಿ, ನೈಋತ್ಯ ರೈಲ್ವೆಯು ಬೆಂಗಳೂರಿನ ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ ರೈಲ್ವೆ ನಿಲ್ದಾಣ ಮತ್ತು ಬೆಳಗಾವಿ ನಡುವೆ ನೂತನ ವಂದೇ ಭಾರತ್ ರೈಲು ಸೇವೆಗಳನ್ನು ಪರಿಚಯಿಸುತ್ತಿದೆ. ಈ ಅರೆ-ಹೈಸ್ಪೀಡ್ ರೈಲು ಸೇವೆ ಬುಧವಾರ ಹೊರತುಪಡಿಸಿ, ವಾರದಲ್ಲಿ ಆರು ದಿನಗಳು ಸಂಚರಿಸಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**